# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ವಿಜಯಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕಿನ ಯಲ್ಲಮ್ಮ ಬೂದಿಹಾಳ ಗ್ರಾಮವನ್ನು ಯಲಗೂರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮುಂದುವರೆಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶದ ಸಂಖ್ಯೆ ಗ್ರಾಅಪ 759 ಗ್ರಾಪಂಅ 2014, ಬೆಂಗಳೂರು, ದಿನಾಂಕ 09.01.2015.
2. ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರ ಪತ್ರ ಸಂಖ್ಯೆ ಗ್ರಾ.ಪಂ. ಚುನಾವಣೆ:ಸಿಆರ್:1808/2016-17, ದಿನಾಂಕ: 24.11.2016, 14.03.2017 ಹಾಗೂ 16.05.2017.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿ ವಿಜಯಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಬಳಬಟ್ಟಿ ಗ್ರಾಮ ಪಂಚಾಯತಿಯನ್ನು ಹೊಸದಾಗಿ ಸ್ಥಾಪಿಸಿ, ಸದರಿ ಗ್ರಾಮ ಪಂಚಾಯತಿಗೆ ಬಳಬಟ್ಟಿ, ಯಲ್ಲಮ್ಮ ಬೂದಿಹಾಳ ಹಾಗೂ ಮಸೂತಿ ಗ್ರಾಮಗಳನ್ನು ಸೇರ್ಪಡೆ ಮಾಡಿ ಅದೇಶ ಹೊರಡಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ ಇವರು ಯಲಗೂರ ಗ್ರಾಮ ಪಂಚಾಯತಿಯಲ್ಲಿ 2011 ರ ಜನಗಣತಿಯ ಪ್ರಕಾರ ಒಟ್ಟು ಜನಸಂಖ್ಯೆಯು 4995 ಆಗಿರುತ್ತದೆ ಹಾಗೂ ಬಳಬಟ್ಟಿ ಗ್ರಾಮ ಪಂಚಾಯತಿಯಲ್ಲಿ ಜನಸಂಖ್ಯೆಯು 5045 ಆಗಿರುತ್ತದೆ ಎಂದು ತಿಳಿಸಿದ್ದಾರೆ. ಯಲ್ಲಮ್ಮ ಬೂದಿಹಾಳ ಗ್ರಾಮವು ಪುನರ್ ವಿಂಗಡಣೆಗೂ ಮುನ್ನ ಯಲಗೂರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿದ್ದು ಯಲ್ಲಮ್ಮ ಬೂದಿಹಾಳ ಗ್ರಾಮದಿಂದ ಯಲಗೂರ ಗ್ರಾಮಕ್ಕೆ ಇರುವ ಅಂತರ 4.50 ಕಿ.ಮೀ.ಇದ್ದು ಹಾಗೂ ಪ್ರಸ್ತುತ ಸದರಿ ಗ್ರಾಮವನ್ನು ಸೇರ್ಪಡೆ ಮಾಡಿರುವ ಬಳಬಟ್ಟಿ ಗ್ರಾಮಪಂಚಾಯತಿಯಿಂದ 5.50 ಕಿ.ಮೀ. ಅಂತರದಲ್ಲಿರುತ್ತದೆ. ವಡವಡಗಿ ಗ್ರಾಮವು ಪ್ರಸ್ತುತ ಯಲಗೂರ ಗ್ರಾಮ ಪಂಚಾಯತಿಯಲ್ಲಿದ್ದು, ವಡವಡಗಿ ಗ್ರಾಮದಿಂದ ಯಲಗೂರ ಗ್ರಾಮ ಪಂಚಾಯತಿಗೆ ಇರುವ ಅಂತರ 5.00 ಕಿ.ಮೀ. ಇರುತ್ತದೆ ಆದರೆ ವಡವಡಗಿ ಗ್ರಾಮದಿಂದ ಬಳಬಟ್ಟಿ ಗ್ರಾಮ ಪಂಚಾಯತಿಗೆ ಇರುವ ಅಂತರ 1.20 ಕಿ.ಮೀ. ಇರುತ್ತದೆ ಎಂದು ವರದಿ ಸಲ್ಲಿಸಿದ್ದಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಸಾರ್ವಜನಿಕರು ಗ್ರಾಮ ಪಂಚಾಯತಿಯಲ್ಲಿ ತಮ್ಮ ಕೆಲಸ ಕಾರ್ಯಗಳಿಗೆ ಸಂಚರಿಸಲು ಹತ್ತಿರವಿರುವುದರಿಂದ ಮತ್ತು ಆಡಳಿತಾತ್ಮಕ ಕಾರಣಗಳಿಂದಾಗಿ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ಯಲ್ಲಮ್ಮ ಬೂದಿಹಾಳ ಗ್ರಾಮವನ್ನು ಬಳಬಟ್ಟಿ ಗ್ರಾಮ ಪಂಚಾಯತಿಯಿಂದ ಯಲಗೂರ ಗ್ರಾಮ ಪಂಚಾಯತಿಗೆ ಹಾಗೂ ವಡವಡಗಿ ಗ್ರಾಮವನ್ನು ಯಲಗೂರ ಗ್ರಾಮ ಪಂಚಾಯತಿಯಿಂದ ಬಳಬಟ್ಟಿ ಗ್ರಾಮ ಪಂಚಾಯತಿಗೆ ಸೇರ್ಪಡೆ ಮಾಡಬೇಕಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ, ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಮತ್ತು ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿಯ ವಿನಂತಿ ಮೇರೆಗೆ ಅಥವಾ ಅನ್ಯಥಾ ಮತ್ತು ಅಧಿಸೂಚನೆಯ ಮೂಲಕ ಪ್ರಸ್ತಾಪವನ್ನು ಮೊದಲೇ ಪ್ರಕಟಿಸಿದ ತರುವಾಯ, ಯಾವುದೇ ಸಮಯದಲ್ಲಿ, ಯಾವುದೇ ಪಂಚಾಯತಿ ಪ್ರದೇಶವನ್ನು ಅಂಥ ಪಂಚಾಯತಿ ಪ್ರದೇಶದೊಳಗೆ ಯಾವುದೇ ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಸೇರಿಸುವ ಮೂಲಕ ಹೆಚ್ಚಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ಯಲ್ಲಮ್ಮ ಬೂದಿಹಾಳ ಗ್ರಾಮವನ್ನು ಬಳಬಟ್ಟಿ ಗ್ರಾಮ ಪಂಚಾಯತಿಯಿಂದ ಯಲಗೂರ ಗ್ರಾಮ ಪಂಚಾಯತಿಗೆ ಹಾಗೂ ವಡವಡಗಿ ಗ್ರಾಮವನ್ನು ಯಲಗೂರ ಗ್ರಾಮ ಪಂಚಾಯತಿಯಿಂದ ಬಳಬಟ್ಟಿ ಗ್ರಾಮ ಪಂಚಾಯತಿಗೆ ಸೇರ್ಪಡೆಗೊಳಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

-

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 708 ಗ್ರಾಪಂಅ 2016,**
**ಬೆಂಗಳೂರು, ದಿನಾಂಕ: 15.06.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಎ) ರನ್ವಯ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನ ಯಲ್ಲಮ್ಮ ಬೂದಿಹಾಳ ಗ್ರಾಮವನ್ನು ಬಳಬಟ್ಟಿ ಗ್ರಾಮ ಪಂಚಾಯತಿಯಿಂದ ಯಲಗೂರ ಗ್ರಾಮ ಪಂಚಾಯತಿಗೆ ಹಾಗೂ ವಡವಡಗಿ ಗ್ರಾಮವನ್ನು ಯಲಗೂರ ಗ್ರಾಮ ಪಂಚಾಯತಿಯಿಂದ ಬಳಬಟ್ಟಿ ಗ್ರಾಮ ಪಂಚಾಯತಿಗೆ ಸೇರ್ಪಡೆಗೊಳಿಸಿ ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ.ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ.
4. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
6. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಳಬಟ್ಟಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
8. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಲಗೂರ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
5. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.